## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 758
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ.
ಉತ್ತರಿಸುವ ದಿನಾಂಕ : 17-12-2018
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರು ಹಾಗೂ ಸಹ ಶಿಕ್ಷಕರುಗಳಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ/ಅನುದಾನಿತ ಶಿಕ್ಷಕರಿಗೆ ದಿನಾಂಕ:01.01.2016 ರಿಂದ ನೀಡಿರುವಂತೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ) | ಹಾಗಿದ್ದಲ್ಲಿ, ಸಮಾನಾಂತರ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸದರಿಯವರಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ನೀಡದಿರಲು ಕಾರಣಗಳೇನು; | ವಸತಿ ಶಾಲೆಗಳ ಪ್ರಾಂಶುಪಾಲರು ಮತ್ತು ಸಹ ಶಿಕ್ಷಕರಿಗೆ ಹೆಚ್ಚುವರಿ ವೇತನ ಬಡ್ತಿಯನ್ನು ಈ ಕೆಳಕಂಡ ಕಾರಣಗಳಿಂದ ನೀಡಿರುವುದಿಲ್ಲ. ಆರ್ಥಿಕ ಇಲಾಖೆಯು ಈ ಕೆಳಕಂಡ ಕಾರಣಗಳನ್ನು ನೀಡಿ ಪ್ರಸ್ತಾವನೆಯನ್ನು ತಿರಸ್ಕರಿಸಿದೆ.<br>(1) 01.07.2017 ರಿಂದ ಪರಿಷ್ಕೃತ ವೇತನ ಶ್ರೇಣಿಯು ಜಾರಿಗೆ ತಂದಿರುವುದರಿಂದ, 2012ರ ಪರಿಷ್ಕೃತ ಶ್ರೇಣಿಯು ನಿರಶನಗೊಂಡಿರುತ್ತದೆ.<br><br>(2) ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ಮಂಜೂರು ಮಾಡಲಾದ ಹೆಚ್ಚುವರಿ ವೇತನ ಬಡ್ತಿಯನ್ನು ದಿನಾಂಕ: 01.11.2018 ರಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿರುತ್ತದೆ. ಆದುದರಿಂದ ವಸತಿ ಶಾಲಾ ಶಿಕ್ಷಕರುಗಳಿಗೆ ಈ ಸೌಲಭ್ಯವನ್ನು ವಿಸ್ತರಿಸಲು ಅವಕಾಶವಿರುವುದಿಲ್ಲ. ಆದಾಗ್ಯೂ ಈ ಕುರಿತು ಪರಿಶೀಲಿಸಲಾಗುತ್ತಿದೆ. |
| ಇ) | ಯಾವ ಕಾಲಮಿತಿಯಲ್ಲಿ ಹೆಚ್ಚುವರಿ ಬಡ್ತಿಯನ್ನು ಮಂಜೂರು ಮಾಡಲಾಗುವುದು; | ಪರಿಶೀಲನೆಗೆ ಒಳಪಟ್ಟಿರುತ್ತದೆ. |
| (ಈ) | ಸದರಿ ಸಿಬ್ಬಂದಿಗೆ ಶಿಕ್ಷಣ ಇಲಾಖೆಯಲ್ಲಿನ ಸಿಬ್ಬಂದಿಗೆ ನೀಡುವಂತೆ ಮುಂಬಡ್ತಿ ಸೌಲಭ್ಯ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಹೌದು |

| | | |
|---|---|---|
| (ಉ) | ಹಾಗಿದ್ದಲ್ಲಿ, ಮುಂಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಲಾಗುವುದೇ; | ಸಂಘದ ವೃಂದ ಮತ್ತು ನೇಮಕಾತಿ ನಿಯಮದನ್ವಯ ಸಹಶಿಕ್ಷಕರಿಗೆ ಪದೋನ್ನತಿ ನೀಡಲು 05 ವರ್ಷಗಳ ತೃಪ್ತಿಕರ ಸೇವೆಯನ್ನು ಶಿಕ್ಷಕರ ಹುದ್ದೆಯಲ್ಲಿ ಪೂರ್ಣಗೊಳಿಸುವ ನಿಯಮವಿರುತ್ತದೆ. ಕೆಲವು ಶಿಕ್ಷಕರು ಈ ಅವಧಿಯನ್ನು 2016–17 ಮತ್ತು 2017–18ನೇ ಸಾಲಿನಲ್ಲಿ ಪೂರ್ಣಗೊಳಿಸಿರುತ್ತಾರೆ.<br>309 ಪ್ರಾಂಶುಪಾಲರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗ ಅಧಿಸೂಚನೆ ಹೊರಡಿಸಿತ್ತು. ಈ ಅಧಿಸೂಚನೆಯನ್ನು ಪ್ರಶ್ನಿಸಿ ಕೆಲವು ಶಿಕ್ಷಕ್ಷರು ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:40229/2017 (ಎಸ್–ಪಿಆರ್‌ಒ)ನ್ನು ದಾಖಲಿಸಲಾಗಿದೆ. ಮಾನ್ಯ ನ್ಯಾಯಾಲಯವು ಶೇ.50 ರಷ್ಟು ಹುದ್ದೆಗಳನ್ನು ಮಾತ್ರ ನೇಮಕಾತಿ ಮಾಡಿಕೊಳ್ಳಲು ತಿಳಿಸಿದೆ. ಸರ್ಕಾರವು ಪದೋನ್ನತಿಗೆ ಲಭ್ಯವಿರುವ ಪ್ರಾಂಶುಪಾಲರ ಹುದ್ದೆಗಳನ್ನು ಪರಿಗಣಿಸಿ ಪದೋನ್ನತಿ ನೀಡಲಾಗುವುದು.<br>ಸಂಘದ ಮುಂಬಡ್ತಿ ಸಮಿತಿಯನ್ನು ದಿ:31.07.2018 ರಂದು ರಚಿಸಲಾಗಿದೆ. ಸಂಘದ ವೃಂದ ಮತ್ತು ನೇಮಕಾತಿ ನಿಯಮದನ್ವಯ ಸಹಶಿಕ್ಷಕ ವೃಂದದ ಹುದ್ದೆಗಳಿಂದ ಪ್ರಾಂಶುಪಾಲರ ಹುದ್ದೆಗಳಿಗೆ ಮುಂಬಡ್ತಿ/ಪದೋನ್ನತಿ ನೀಡಲು ಕ್ರಮ ವಹಿಸಲಾಗುತ್ತಿದೆ. |
| (ಊ) | ಯಾವ ಕಾಲಮಿತಿಯಲ್ಲಿ ಬಡ್ತಿಗೆ ಅವಕಾಶ ಕಲ್ಪಿಸಲಾಗುವುದು? | |

ಸಕಇ 638 ಮೊದೇಶಾ 2018

(ಪ್ರಿಯಾಂಕ್ ಖರ್ಗೆ)
ಸಮಾಜ ಕಲ್ಯಾಣ ಸಚಿವರು.